**Bangalore**
**Regional News**
**19.09.2026 / 18.40 hrs**

ಆಕಾಶವಾಣಿ ಬೆಂಗಳೂರು
ಪ್ರದೇಶ ಸಮಾಚಾರ

ಮುಖ್ಯಾಂಶಗಳು

೧. ಕಸ್ತೂರಿ ರಂಗನ್ ವರದಿ ಕುರಿತಂತೆ ಶಿವಮೊಗ್ಗ, ಚಿಕ್ಕಮಗಳೂರಿನಲ್ಲಿ ಸಾರ್ವಜನಿಕರೊಂದಿಗೆ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಸಂವಾದ

೨. ದೇಶಾದ್ಯಂತ ರೋಜ್‌ಗಾರ್ ಮೇಳ ; ರಾಜ್ಯದ ವಿವಿಧೆಡೆ ಕೇಂದ್ರ ಸಚಿವರಿಂದ ನೇಮಕಾತಿ ಪತ್ರ ವಿತರಣೆ

೩. ಯುವಜನತೆ ಆರೋಗ್ಯ ಕ್ಷೇತ್ರವನ್ನು ಮತ್ತಷ್ಟು ಬಲಪಡಿಸುವಂತೆ ಕೇಂದ್ರ ಸಚಿವ ಪ್ರಲ್ಹಾದ್ ಜೋಶಿ ಕರೆ

೪. ಹಾಲಿನ ದರ ಏರಿಕೆ ಕುರಿತಂತೆ ಶೀಘ್ರವೇ ಸಭೆ ನಡೆಸಿ ತೀರ್ಮಾನ ; ಸರ್ಕಾರ ಸ್ಪಷ್ಟನೆ

೫. ರಾಜ್ಯ ಹೈಕೋರ್ಟ್‌ಗೆ ಮೂವರು ಹೆಚ್ಚುವರಿ ನ್ಯಾಯಮೂರ್ತಿಗಳನ್ನು ನೇಮಕ ಮಾಡಿದ ರಾಷ್ಟ್ರಪತಿ

**<>><><*><><<>**

ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಇಂದು ಶಿವಮೊಗ್ಗದ ತೀರ್ಥಹಳ್ಳಿಯಲ್ಲಿ ಹಾಗೂ ಚಿಕ್ಕಮಗಳೂರಿನಲ್ಲಿ ಕಸ್ತೂರಿ ರಂಗನ್ ವರದಿ ಜಾರಿ ವಿಚಾರವಾಗಿ ಸಾರ್ವಜನಿಕರೊಂದಿಗೆ ಸಂವಾದ ನಡೆಸಿದರು. ಬಳಿಕ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಮಲೆನಾಡಿನ ಪ್ರವಾಸೋದ್ಯಮಕ್ಕೆ ವಿಶೇಷ ಪ್ಯಾಕೇಜ್ ನೀಡಲು ನಿರ್ಧರಿಸಲಾಗಿದೆ ಎಂದು ತಿಳಿಸಿದ್ದಾರೆ. ಕಸ್ತೂರಿ ರಂಗನ್ ವರದಿಯ ಕುರಿತು ಮೂರು ದಿನಗಳ ವಿಶೇಷ ಅಧಿವೇಶನದಲ್ಲಿ ಸಮಗ್ರ ಚರ್ಚೆ ನಡೆಸಲಾಗುವುದು. ರಾಜ್ಯದ ಹಿತದೃಷ್ಟಿಯಿಂದ ದೆಹಲಿಗೆ ಸರ್ವಪಕ್ಷ ನಿಯೋಗ ಕೊಂಡೊಯ್ಯಲಾಗುವುದು ಎಂದು ಸ್ಪಷ್ಟಪಡಿಸಿದ್ದಾರೆ. ಇದೇ ವೇಳೆ ಮಾತನಾಡಿದ ಸಚಿವ ಮಧುಬಂಗಾರಪ್ಪ, ರಾಜ್ಯ ಸರ್ಕಾರ ಕಸ್ತೂರಿ ರಂಗನ್ ವರದಿ ತಿರಸ್ಕರಿಸಿದ್ದರೂ ಕೇಂದ್ರ ಸರ್ಕಾರ ೭ನೇ ಬಾರಿ ಕರಡು ಅಧಿಸೂಚನೆ ಹೊರಡಿಸುವ ಮೂಲಕ ಮಲೆನಾಡಿನ ಜನರನ್ನು ಮತ್ತೆ ಬೀದಿಗೆ ತರುವ ಕೆಲಸ ಮಾಡುತ್ತಿದೆ ಎಂದು

ಆರೋಪಿಸಿದ್ದಾರೆ. ಕಸ್ತೂರಿ ರಂಗನ್ ವರದಿಯನ್ನು ಯಾವುದೇ ಕಾರಣಕ್ಕೂ ಒಪ್ಪಲು ಸಾಧ್ಯವಿಲ್ಲ ಎಂದು ಸ್ಪಷ್ಟಪಡಿಸಿದ್ದಾರೆ.

<>><><*><><<>

ದೇಶಾದ್ಯಂತ ೪೫ ಸ್ಥಳಗಳಲ್ಲಿ ಇಂದು ಆಯೋಜಿಸಲಾಗಿದ್ದ ೨೦ನೇ ರೋಜ್‌ಗಾರ್ ಮೇಳವನ್ನು ಪ್ರಧಾನಿ ನರೇಂದ್ರ ಮೋದಿ, ವಿಡಿಯೋ ಕಾನ್ಫರೆನ್ಸ್ ಮೂಲಕ ಉದ್ಘಾಟಿಸಿದರು. ಬೆಂಗಳೂರಿನ ಜಾಲಹಳ್ಳಿಯಲ್ಲಿ ನಡೆದ ಕಾರ್ಯಕ್ರಮದಲ್ಲಿ ಕೇಂದ್ರ ಭಾರೀ ಕೈಗಾರಿಕೆ ಮತ್ತು ಉಕ್ಕು ಸಚಿವ ಹೆಚ್.ಡಿ.ಕುಮಾರಸ್ವಾಮಿ ೧೫೬ ಅಭ್ಯರ್ಥಿಗಳಿಗೆ ನೇಮಕಾತಿ ಪತ್ರಗಳನ್ನು ಹಸ್ತಾಂತರಿಸಿದರು. ಇನ್ನೊಂದೆಡೆ ಸಚಿವೆ ಶೋಭಾ ಕರಂದ್ಲಾಜೆ, ಬೆಂಗಳೂರಿನ ಆಯ್‌ಕರ್ ಭವನದಲ್ಲಿ ನಡೆದ ಉದ್ಯೋಗ ಮೇಳದಲ್ಲಿ ಮುಖ್ಯ ಅತಿಥಿಯಾಗಿ ಪಾಲ್ಗೊಂಡು ನೇಮಕಾತಿ ಪತ್ರಗಳನ್ನು ವಿತರಿಸಿದರು. ಬಳಿಕ ಮಾತನಾಡಿದ ಅವರು, ಸರ್ಕಾರಿ ಉದ್ಯೋಗ ಎನ್ನುವುದು ಕೇವಲ ಉದ್ಯೋಗವಲ್ಲ, ದೇಶದ ಜನರ ಸೇವೆ ಮಾಡುವ ಅವಕಾಶವಾಗಿವೆ. ಉತ್ತಮ ಆಡಳಿತ ನೀಡುವಲ್ಲಿ ಪ್ರತಿಯೊಬ್ಬ ನೌಕರನ ಪಾತ್ರವು ಮಹತ್ವದ್ದಾಗಿದೆ ಎಂದು ತಿಳಿಸಿದ್ದಾರೆ. ಮೈಸೂರಿನ ವಾಕ್ ಮತ್ತು ಶ್ರವಣ ಸಂಸ್ಥೆಯ ಸಭಾಂಗಣದಲ್ಲಿ ನಡೆದ ರೋಜ್‌ಗಾರ್ ಮೇಳವನ್ನು ಕೇಂದ್ರ ಸಚಿವ ವಿ.ಸೋಮಣ್ಣ ಉದ್ಘಾಟಿಸಿದರು. ಬಳಿಕ ಮಾತನಾಡಿದ ಅವರು, ನೇಮಕಾತಿ ಪತ್ರ ಪಡೆದವರು ಉದ್ಯೋಗವನ್ನು ಕೇವಲ ವೈಯಕ್ತಿಕ ಜೀವನೋಪಾಯದ ದೃಷ್ಟಿಯಿಂದ ನೋಡದೇ ರಾಷ್ಟ್ರ ನಿರ್ಮಾಣದ ಭಾಗವಾಗಿ ಪರಿಗಣಿಸಬೇಕು ಎಂದು ತಿಳಿಸಿದ್ದಾರೆ. ರೋಜ್‌ಗಾರ್ ಮೇಳದ ಮೂಲಕ ನೇಮಕಾತಿ ಪಡೆಯುತ್ತಿರುವ ೫೧ ಸಾವಿರ ಯುವಕರೊಂದಿಗೆ ಅವರ ಕುಟುಂಬಗಳಿಗೂ ಆರ್ಥಿಕ ಹಾಗೂ ಸಾಮಾಜಿಕ ಭದ್ರತೆ ಹೆಚ್ಚಲಿದೆ ಎಂದು ಹೇಳಿದ್ದಾರೆ.

<>><><*><><<>

ಭಾರತದ ಆರ್ಥಿಕತೆ ಶೇಕಡ ೭.೮ ರಷ್ಟು ಬೆಳವಣಿಗೆ ದಾಖಲಿಸುತ್ತಿದ್ದು, ಶಾಂತಿ ಮತ್ತು ಸ್ಥಿರತೆ ಇದ್ದಾಗ ಮಾತ್ರ ಸಮೃದ್ಧಿ ಸಾಧ್ಯ ಎಂದು ಕೇಂದ್ರ ಸಚಿವ ಪ್ರಲ್ಹಾದ್ ಜೋಶಿ ಹೇಳಿದ್ದಾರೆ. ಹುಬ್ಬಳ್ಳಿಯಲ್ಲಿಂದು ಖಾಸಗಿ ವೈದ್ಯಕೀಯ ಸಂಶೋಧನಾ ಕೇಂದ್ರ ಹಾಗೂ ಆಸ್ಪತ್ರೆಯನ್ನು ಉದ್ಘಾಟಿಸಿ ಮಾತನಾಡಿದ ಅವರು, ಭಾರತೀಯ ವೈದ್ಯರ ಮೇಲೆ ಜಾಗತಿಕ ಮಟ್ಟದಲ್ಲಿ ವಿಶ್ವಾಸ ಹೆಚ್ಚಿದ್ದು, ದೇಶದ ಯುವ ಮಾನವ ಸಂಪನ್ಮೂಲಗಳನ್ನು ಸಮರ್ಥವಾಗಿ ಬಳಸಿಕೊಂಡು ಆರೋಗ್ಯ ಕ್ಷೇತ್ರವನ್ನು ಮತ್ತಷ್ಟು ಬಲಪಡಿಸಬೇಕಾಗಿದೆ ಎಂದು ಕರೆ ನೀಡಿದ್ದಾರೆ. ೧೯೧೬ರಲ್ಲಿ ಆರಂಭವಾದ ಕೆ.ಎಲ್.ಇ. ಸಂಸ್ಥೆಯ ಶಿಕ್ಷಣದ ಪಯಣ ಇಂದು ೩೧೦ಕ್ಕೂ ಹೆಚ್ಚು ಶಿಕ್ಷಣ ಸಂಸ್ಥೆಗಳು ಒಂದು ಲಕ್ಷ

೪೬ ಸಾವಿರ ವಿದ್ಯಾರ್ಥಿಗಳು ಹಾಗೂ ೧೮ ಸಾವಿರಕ್ಕೂ ಅಧಿಕ ಶಿಕ್ಷಕರನ್ನು ಹೊಂದಿರುವ ಬೃಹತ್ ಸಂಸ್ಥೆಯಾಗಿ ಬೆಳೆದಿದೆ ಎಂದು ಶ್ಲಾಘಿಸಿದ್ದಾರೆ.

<>><><*><><<>

ಹಾಲಿನ ಖರೀದಿ ದರ ಏರಿಕೆ ಮಾಡಬೇಕು ಎಂದು ರೈತರಿಂದ ಬೇಡಿಕೆ ಹೆಚ್ಚಾಗಿದ್ದು, ಈ ಸಂಬಂಧ ಶೀಘ್ರವೇ ಸಭೆ ನಡೆಸಿ ತೀರ್ಮಾನ ಕೈಗೊಳ್ಳಲಾಗುವುದು ಎಂದು ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ತಿಳಿಸಿದ್ದಾರೆ. ಚಿಕ್ಕಮಗಳೂರಿನಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ರೈತರ ಸಮಸ್ಯೆಗಳಿಗೆ ಶೀಘ್ರವೇ ಪರಿಹಾರ ನೀಡಲಾಗುವುದು ಎಂದು ಭರವಸೆ ನೀಡಿದ್ದಾರೆ. ಇನ್ನೊಂದೆಡೆ ಚಾಮರಾಜನಗರ ಜಿಲ್ಲೆಯ ಗುಂಡ್ಲುಪೇಟೆಯಲ್ಲಿ ಪಶುಸಂಗೋಪನೆ ಸಚಿವ ಸಿ.ಪುಟ್ಟರಂಗಶೆಟ್ಟಿ ಮಾತನಾಡಿ ಹಾಲಿನ ದರ ಏರಿಕೆಯ ಸಾಧಕ ಭಾದಕಗಳ ಬಗ್ಗೆ ಮುಖ್ಯಮಂತ್ರಿ ಅವರೊಂದಿಗೆ ಚರ್ಚಿಸಿ ಅಗತ್ಯ ಕ್ರಮ ಕೈಗೊಳ್ಳಲಾಗುವುದು ಎಂದು ಸ್ಪಷ್ಟಪಡಿಸಿದ್ದಾರೆ. ವಿಧಾನಸೌಧ ಮುತ್ತಿಗೆ ಹಾಕಲಾಗುವುದು ಎಂಬ ಹಾಲು ಒಕ್ಕೂಟಗಳ ನಿರ್ಧಾರ ಸರಿಯಲ್ಲ ಎಂದು ಅವರು ಅಭಿಪ್ರಾಯಪಟ್ಟಿದ್ದಾರೆ. ಮೇವಿನ ಕೊರತೆ ನೀಗಿಸುವ ಸಲುವಾಗಿ ಮೇವು ಖರೀದಿಸಿ ಪೂರೈಸುವುದರ ಜೊತೆಗೆ ಮೇವಿನ ಬಿತ್ತನೆ ಬೀಜಗಳ ವಿತರಣೆಗಾಗಿ ಪಶುಸಂಗೋಪನೆ ಇಲಾಖೆಯಿಂದ ೨೫ ಕೋಟಿ ರೂಪಾಯಿ ಬರ ಪರಿಹಾರ ಬಿಡುಗಡೆ ಮಾಡಲಾಗಿದೆ ಎಂದು ಅವರು ಹೇಳಿದ್ದಾರೆ.

<>><><*><><<>

ಕರ್ನಾಟಕ ಸೇರಿದಂತೆ ದೇಶದ ನಾಲ್ಕು ಹೈಕೋರ್ಟ್‌ಗಳಲ್ಲಿ ೧೪ ನ್ಯಾಯಾಂಗ ಅಧಿಕಾರಿಗಳನ್ನು ನ್ಯಾಯಮೂರ್ತಿಗಳು ಮತ್ತು ಹೆಚ್ಚುವರಿ ನ್ಯಾಯಮೂರ್ತಿಗಳನ್ನಾಗಿ ರಾಷ್ಟ್ರಪತಿ ದ್ರೌಪದಿ ಮುರ್ಮು ನೇಮಕ ಮಾಡಿದ್ದಾರೆ.  ರಾಜ್ಯ ಹೈಕೋರ್ಟ್‌ಗೆ ಉಷಾರಾಣಿ, ಕೆ.ಎಸ್.ಭರತ್ ಕುಮಾರ್ ಮತ್ತು ನೇರಲೆ ವಿ.ಭವಾನಿ ಅವರನ್ನು ಹೆಚ್ಚುವರಿ ನ್ಯಾಯಾಮೂರ್ತಿಗಳನ್ನಾಗಿ ನೇಮಕ ಮಾಡಲಾಗಿದೆ ಎಂದು ಕೇಂದ್ರ ಕಾನೂನು ಮತ್ತು ನ್ಯಾಯ ಸಚಿವಾಲಯ ತಿಳಿಸಿದೆ. ಸೆಪ್ಟೆಂಬರ್ ೧೦ ರಂದು ನಡೆದ ಸಭೆಯಲ್ಲಿ ಸುಪ್ರೀಂಕೋರ್ಟ್ ಕೊಲಿಜಿಯಂ ನೀಡಿದ ಶಿಫಾರಸ್ಸುಗಳ ಆಧಾರದ ಮೇಲೆ ಈ ನೇಮಕಾತಿಗಳನ್ನು ಮಾಡಲಾಗಿದೆ.

<>><><*><><<>

ಪ್ರಧಾನಿ ನರೇಂದ್ರ ಮೋದಿ ಅವರು, ಸಾರ್ವಜನಿಕ ಸೇವೆಯಲ್ಲಿ ೭೫ ವರ್ಷ ಪೂರ್ಣಗೊಳಿಸಿದ ಹಿನ್ನೆಲೆಯಲ್ಲಿ ದೇಶಾದ್ಯಂತ ಸೇವಾ ಸಂಕಲ್ಪ ಅಭಿಯಾನ ಹಮ್ಮಿಕೊಳ್ಳಲಾಗಿದೆ. ಇದರ ಭಾಗವಾಗಿ ಹಲವು ವಲಯಗಳಲ್ಲಿ ಕೈಗೊಂಡ ಮಹತ್ವದ ಸುಧಾರಣೆಗಳ ಕುರಿತ ಸರಣಿಯನ್ನು ಆಕಾಶವಾಣಿ ಪ್ರಸಾರ ಮಾಡುತ್ತಿದೆ. ಇಂದು ಬಾಹ್ಯಾಕಾಶ ವಲಯದಲ್ಲಿ ಖಾಸಗಿ ಸಹಭಾಗಿತ್ವಕ್ಕೆ ಅವಕಾಶ ಕಲ್ಪಿಸುವುದರ ಕುರಿತ ಒಂದು ನೋಟ. ಭಾರತದ ಬಾಹ್ಯಾಕಾಶ ಕಾರ್ಯಕ್ರಮವು ರಾಷ್ಟ್ರೀಯ ಅಭಿವೃದ್ಧಿಗೆ ಮಹತ್ತರವಾದ ಕೊಡುಗೆ ನೀಡಿದೆ ಎಂದು ಇಸ್ರೋ ವಿಜ್ಞಾನಿ ಹಾಗೂ ವೈಜ್ಞಾನಿಕ ಕಾರ್ಯದರ್ಶಿ ಎಂ.ಗಣೇಶ್ ಪಿಳ್ಳೈ ಅಭಿಪ್ರಾಯಪಟ್ಟಿದ್ದಾರೆ. ಆಕಾಶವಾಣಿಯೊಂದಿಗೆ ಮಾತನಾಡಿದ ಅವರು, ಇಸ್ರೋ ಸಂವಹನ, ಹವಾಮಾನ ಮುನ್ಸೂಚನೆ, ವಿಪತ್ತು ನಿರ್ವಹಣೆ, ಕೃಷಿ ಮತ್ತು ವೈಜ್ಞಾನಿಕ ಪ್ರಗತಿಯ ಮೂಲಕ ಬಾಹ್ಯಾಕಾಶ ತಂತ್ರಜ್ಞಾನದ ಪ್ರಯೋಜನವನ್ನು ದೇಶದ ಸಾಮಾನ್ಯ ಜನರಿಗೆ ತಲುಪಿಸಿದೆ ಎಂದು ತಿಳಿಸಿದ್ದಾರೆ. ಇನ್‌ಸ್ಪೇಸ್ ಖಾಸಗಿ ಭಾಗವಹಿಸುವಿಕಗೆ ಅನುವು ಮಾಡಿಕೊಟ್ಟರೆ ಎನ್‌ಎಸ್‌ಐಎಲ್ ಇಸ್ರೋ ಅಭಿವೃದ್ಧಿಪಡಿಸಿದ ತಂತ್ರಜ್ಞಾನವನ್ನು ವಾಣಿಜ್ಯೀಕರಣಗೊಳಿಸುತ್ತಿದೆ ಎಂದು ಹೇಳಿದ್ದಾರೆ.

ಧ್ವನಿ: ಎಂ.ಗಣೇಶ್ ಪಿಳ್ಳೈ

<>><><*><><<>

ಮುಂದಿನ ವಾರದಲ್ಲಿ ರಾಜ್ಯಾದ್ಯಂತ ವ್ಯಾಪಕ ಮಳೆಯಾಗಲಿದೆ ಎಂದು ಹವಾಮಾನ ಇಲಾಖೆ ನಿರ್ದೇಶಕ ಡಾ.ಸಿ.ಎಸ್.ಪಾಟೀಲ್ ಮುನ್ನೆಚ್ಚರಿಕೆ ನೀಡಿದ್ದಾರೆ. ರಾಜ್ಯದ ಉತ್ತರ ಒಳನಾಡು, ದಕ್ಷಿಣ ಒಳನಾಡು, ಕರಾವಳಿ ಸೇರಿದಂತೆ ಬಹುತೇಕ ಜಿಲ್ಲೆಗಳಲ್ಲಿ ಗುಡುಗು, ಮಿಂಚು ಸಹಿತ ಮಳೆಯಾಗಲಿದೆ ಎಂದು ತಿಳಿಸಿದ್ದಾರೆ. ಬೆಂಗಳೂರಿನಲ್ಲಿ ಮುಂದಿನ ೫ ದಿನಗಳ ಕಾಲ ಗಾಳಿ, ಗುಡುಗು, ಮಿಂಚು ಸಹಿತ ಹಗುರದಿಂದ ಸಾಧಾರಣ ಮಳೆಯಾಗಲಿದೆ ಎಂದು ಮುನ್ಸೂಚನೆ ನೀಡಿದ್ದಾರೆ.

<>><><*><><<>

ರಾಜ್ಯದ ವಿವಿಧೆಡೆ ಇಂದು ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಸಂಪುಟದ ಸಚಿವರು ಪ್ರಜಾಸೇವಾ ಆಂದೋಲನಾ ಸಭೆ ನಡೆಸಿದರು. ಹಾಸನದಲ್ಲಿ ಸಭೆ ನಡೆಸಿ ಮಾತನಾಡಿದ, ಜಿಲ್ಲಾ ಉಸ್ತುವಾರಿ ಸಚಿವ ಕೆ.ಎಂ.ಶಿವಲಿಂಗೇಗೌಡ, ಈ ಬಾರಿ ಸಕಲೇಶಪುರದಲ್ಲಿ ಮಳೆ ಕೊರತೆ ಉಂಟಾಗಿದೆ. ಶೀಘ್ರದಲ್ಲೇ ಬರ ಪೀಡಿತ ತಾಲೂಕು ಎಂದು ಘೋಷಣೆ ಮಾಡಬೇಕು ಎಂದು ತಿಳಿಸಿದ್ದಾರೆ. ಜಿಲ್ಲಾಧಿಕಾರಿಗಳ ನೇತೃತ್ವದಲ್ಲಿ ವಿಶೇಷ ಅದಾಲತ್ ನಡೆಸಿ, ಒಂದೂವರೆ ತಿಂಗಳಲ್ಲಿ

ಹಕ್ಕುಪತ್ರಗಳನ್ನು ವಿತರಿಸಬೇಕು ಎಂದು ಸೂಚಿಸಿದ್ದಾರೆ. ಮೈಸೂರಿನಲ್ಲಿ ಪ್ರಜಾಸೇವಾ ಆಂದೋಲನಾ ಸಭೆ ನಡೆಸಿದ ಡಾ.ಯತೀಂದ್ರ ಸಿದ್ದರಾಮಯ್ಯ, ಸಾರ್ವಜನಿಕರ ಅಹವಾಲುಗಳನ್ನು ಆಲಿಸಿ ಅರ್ಜಿಗಳನ್ನು ಸ್ವೀಕರಿಸಿದರು. ವಿಜಯಪುರದಲ್ಲಿ ಜಿಲ್ಲಾ ಉಸ್ತುವಾರಿ ಸಚಿವ ಎಂ.ಬಿ.ಪಾಟೀಲ್ ಸಭೆ ನಡೆಸಿ, ಈ ಆಂದೋಲನಾದಲ್ಲಿ ಸಲ್ಲಿಕೆಯಾಗುವ ಎಲ್ಲಾ ಅರ್ಜಿಗಳಿಗೆ ಅಧಿಕಾರಿಗಳು ಸಕಾಲದಲ್ಲಿ ಸ್ಪಂದಿಸಬೇಕು. ಇಲ್ಲವಾದಲ್ಲಿ ಅಧಿಕಾರಿಗಳ ವಿರುದ್ಧ ಮುಲಾಜಿಲ್ಲದೇ ಕ್ರಮ ಕೈಗೊಳ್ಳಲಾಗುವುದು ಎಂದು ಎಚ್ಚರಿಕೆ ನೀಡಿದ್ದಾರೆ. ಬೆಳಗಾವಿಯ ಯರಗಟ್ಟಿಯಲ್ಲಿ ಜಿಲ್ಲಾ ಉಸ್ತುವಾರಿ ಸಚಿವ ಸತೀಶ್ ಜಾರಕಿಹೊಳಿ ಪ್ರಜಾಸೇವೆ ಆಂದೋಲನಾ ಸಭೆ ನಡೆಸಿದರು.

**<>><>< ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು ><><<>**